# Akashvani : Bangalore
# National Bulletin In Kannada
# 17.08.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

೧. ಜಾಗತಿಕ ದಕ್ಷಿಣ ರಾಷ್ಟ್ರಗಳ ಅಭಿವೃದ್ಧಿ ಪ್ರೋತ್ಸಾಹಿಸಲು ಭಾರತ ಬದ್ಧ - ಪ್ರಧಾನಮಂತ್ರಿ ನರೇಂದ್ರ ಮೋದಿ

೨. ಭಾರತ ೨೦೨೮ರ ವೇಳೆಗೆ ವಿಶ್ವದ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗುವ ನಿರೀಕ್ಷೆ - ಐಎಂಎಫ್

೩. ವೈದ್ಯರ ಸುರಕ್ಷತೆ ಖಾತರಿಗೆ ಸಮಿತಿ ರಚನೆ; ಆರೋಗ್ಯ ಸಚಿವಾಲಯ ಘೋಷಣೆ

೪. ಭಾರತೀಯ ನ್ಯಾಯ ಸಂಹಿತೆ; ದೇಶದ ಆಧುನಿಕ ಅಪರಾಧ ನ್ಯಾಯದಾನ ಪದ್ಧತಿ- ಸಚಿವ ಅರ್ಜುನ್ ರಾಮ್ ಮೇಘ್‌ವಾಲ್

೫. ಕರ್ನಾಟಕದಲ್ಲಿ ಮೂಡಾ ನಿವೇಶನ ಹಂಚಿಕೆ ಅಕ್ರಮ ಆರೋಪ; ಕಾನೂನು ಹೋರಾಟ ನಡೆಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ತೀರ್ಮಾನ; ಮುಖ್ಯಮಂತ್ರಿ ರಾಜೀನಾಮೆಗೆ ಬಿಜೆಪಿ ಒತ್ತಾಯ

**<><*<><>*><>**

ಜಾಗತಿಕ ದಕ್ಷಿಣ ರಾಷ್ಟ್ರಗಳ ಅಭಿವೃದ್ಧಿಯನ್ನು ಪ್ರೋತ್ಸಾಹಿಸಲು ಭಾರತ ಬದ್ಧವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು, ಗ್ಲೋಬಲ್ ಸೌತ್ ವರ್ಚುವಲ್ ಶೃಂಗಸಭೆಯ ಮೂರನೇ ಆವೃತ್ತಿಯ ತಮ್ಮ ಆರಂಭಿಕ ಭಾಷಣದಲ್ಲಿ ದಕ್ಷಿಣ ಜಗತ್ತಿನೊಂದಿಗೆ ಸಹಕರಿಸುವ ಭಾರತದ ಸಂಕಲ್ಪವನ್ನು ವ್ಯಕ್ತಪಡಿಸಿದರು. ಜಾಗತಿಕ ದಕ್ಷಿಣದ ಎಲ್ಲ ರಾಷ್ಟ್ರಗಳು ಒಂದುಗೂಡಬೇಕು ಹಾಗೂ ಒಂದೇ ಧ್ವನಿಯಲ್ಲಿ ನಿಲ್ಲಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದರು. ವ್ಯಾಪಾರ, ಎಲ್ಲರನ್ನೊಳಗೊಂಡ ಅಭಿವೃದ್ಧಿ, ಸುಸ್ಥಿರ ಅಭಿವೃದ್ಧಿ ಗುರಿಯ ಪ್ರಗತಿ ಹಾಗೂ ಮಹಿಳಾ ನಾಯಕತ್ವದ ಅಭಿವೃದ್ಧಿಯನ್ನು ಪ್ರೋತ್ಸಾಹಿಸಲು ನವದೆಹಲಿಯ ಬದ್ಧತೆಯನ್ನು ಅವರು ಪ್ರಮುಖವಾಗಿ ಪ್ರಸ್ತಾಪಿಸಿದರು. ಎಲ್ಲರನ್ನೊಳಗೊಂಡ ಅಭಿವೃದ್ಧಿಗೆ ಚಾಲನೆ ನೀಡುವಲ್ಲಿ ಡಿಜಿಟಲ್ ಸಾರ್ವಜನಿಕ ಮೂಲಸೌರ್ಯದ ಪಾತ್ರವನ್ನು ಶ್ಲಾಘಿಸಿದ ಪ್ರಧಾನಿ, ಭಾರತದ ಜಿ-೨೦ ಅಧ್ಯಕ್ಷತೆಯ ಅವಧಿಯಲ್ಲಿ ಜಾಗತಿಕ ಡಿಪಿಐ ಠೇವಣಿ ರಚನೆಯು ಮಹತ್ವದ ಬಹುಪಕ್ಷೀಯ ಒಮ್ಮತವನ್ನು ಪ್ರತಿನಿಧಿಸುತ್ತದೆ ಎಂದು ಹೇಳಿದರು. ಜಾಗತಿಕ ದಕ್ಷಿಣಕ್ಕಾಗಿ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಪ್ರಗತಿಯನ್ನು ಮತ್ತಷ್ಟು ತ್ವರಿತಗೊಳಿಸಲು ಭಾರತವು ಸಾಮಾಜಿಕ ಪರಿಣಾಮ ನಿಧಿ ಸ್ಥಾಪಿಸಿದ್ದು, ಈ ನಿಧಿಗೆ ಭಾರತ ೨೫ ದಶಲಕ್ಷ ಡಾಲರ್‌ಗಳ ಆರಂಭಿಕ ಕೊಡುಗೆ ಮುಂದುವರೆಸಲಿದೆ ಎಂದು ಅವರು ಘೋಷಿಸಿದರು. ಪ್ರಸ್ತುತ ಜಾಗತಿಕ ಅನಿಶ್ಚಿತತೆ ಹಾಗೂ ಸವಾಲುಗಳ ವಾತಾವರಣದ ಬಗ್ಗೆ ಪ್ರಧಾನಿ ಕಳವಳ ವ್ಯಕ್ತಪಡಿಸಿದರು. ಕೋವಿಡ್-೧೯ ಪರಿಣಾಮಗಳಿಂದ ಜಗತ್ತು ಇನ್ನೂ ಚೇತರಿಸಿಕೊಳ್ಳುತ್ತಿರುವಾಗ ಯುದ್ಧ ಪರಿಸ್ಥಿತಿಯು ಜಾಗತಿಕ ದಕ್ಷಿಣ ರಾಜ್ಯಗಳ ಅಭಿವೃದ್ಧಿ ಪಯಣವನ್ನು ಮತ್ತಷ್ಟು ಸಂಕೀರ್ಣಗೊಳಿಸಿದೆ ಎಂದು ಪ್ರಧಾನಮಂತ್ರಿ ಹೇಳಿದರು.

**<><*<><>*><>**

ಭಾರತ ೨೦೨೮ರ ವೇಳೆಗೆ ವಿಶ್ವದ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗುವ ನಿರೀಕ್ಷೆಯಿದೆ ಎಂದು ಅಂತಾರಾಷ್ಟ್ರೀಯ ಹಣಕಾಸು ನಿಧಿಯ ಮೊದಲ ಉಪ ವ್ಯವಸ್ಥಾಪಕ ನಿರ್ದೇಶಕಿ ಡಾ.ಗೀತಾ ಗೋಪಿನಾಥ್ ಹೇಳಿದ್ದಾರೆ. ಕಳೆದ ೨೦೨೩-೨೪ನೇ ಹಣಕಾಸು ವರ್ಷದಲ್ಲಿ ಭಾರತದ ಬೆಳವಣಿಗೆ ನಿರೀಕ್ಷೆಗಿಂತಲೂ ಉತ್ತಮವಾಗಿದೆ ಎಂದು ದೆಹಲಿಯ ಖಾಸಗಿ ವಾಹಿನಿಗೆ ನೀಡಿರುವ ಸಂದರ್ಶನದಲ್ಲಿ ಗೀತಾ ಗೋಪಿನಾಥ್ ತಿಳಿಸಿದ್ದಾರೆ. ಭಾರತ, ಮುಂದಿನ ಐದು ಆರು ವರ್ಷಗಳಲ್ಲಿ ಲಕ್ಷಾಂತರ ಉದ್ಯೋಗಗಳನ್ನು ಸೃಷ್ಟಿಸುವ ಅಗತ್ಯವಿದೆ. ಭಾರತದಲ್ಲಿ ದ್ವಿಚಕ್ರ ವಾಹನ ಸೇರಿದಂತೆ ತ್ವರಿತ ಚಲನೆಯ ಗ್ರಾಹಕರ ಸರಕುಗಳ ಒಟ್ಟಾರೆ ಬಳಕೆ ಹೆಚ್ಚುತ್ತಿದೆ ಎಂದರು. ಭಾರತೀಯ ಆಟೋಮೊಬೈಲ್ ತಯಾರಕರ ಸಂಘಟನೆಯ ಇತ್ತೀಚಿನ ಮಾಹಿತಿಯಂತೆ ಕಳೆದ ತಿಂಗಳಲ್ಲಿ ದ್ವಿಚಕ್ರ, ತ್ರಿಚಕ್ರ, ಹಾಗೂ ನಾಲ್ಕು ಚಕ್ರಗಳ ವಾಹನಗಳ ಹಾಗೂ ಪ್ರಯಾಣಿಕ ವಾಹನಗಳ ಒಟ್ಟು ಉತ್ಪಾದನೆ ೨೪ ಲಕ್ಷ ೩೮ ಸಾವಿರ ಘಟಕಗಳನ್ನು ದಾಟಿದೆ.

**<><*<><>*><>**

ವೈದ್ಯರ ಸುರಕ್ಷತೆ ಖಾತರಿಪಡಿಸಲು ಸರ್ಕಾರ ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡಲಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಭರವಸೆ ನೀಡಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ ಪ್ರತಿಭಟನೆ ಕೈಬಿಟ್ಟು, ಕರ್ತವ್ಯಕ್ಕೆ ಹಾಜರಾಗಬೇಕೆಂದು ಮನವಿ ಮಾಡಿದೆ. ಸ್ವಾಸ್ಥ್ಯ, ಆರೋಗ್ಯ ವೃತ್ತಿಪರರ ಸುರಕ್ಷತೆ ಖಾತರಿಪಡಿಸುವಂತೆ ಉಪಕ್ರಮಗಳ ಸಲಹೆ ನೀಡಲು ಸಮಿತಿಯೊಂದನ್ನು ರಚಿಸಲಾಗುವುದು. ರಾಜ್ಯ ಸರ್ಕಾರಗಳೂ ಸೇರಿದಂತೆ ಇದಕ್ಕೆ ಸಂಬಂಧಪಟ್ಟ ಎಲ್ಲ ಪ್ರತಿನಿಧಿಗಳಿಂದ ಸಲಹೆಗಳನ್ನು ಆಹ್ವಾನಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಪಶ್ಚಿಮ ಬಂಗಾಳದ ಕೊಲ್ಕತ್ತಾದ ಆರ್.ಜಿ.ಕರ್ ವೈದ್ಯಕೀಯ ಕಾಲೇಜಿನಲ್ಲಿ ರೆಸಿಡೆಂಟ್ ವೈದ್ಯೆ ಮೇಲೆ ಇತ್ತೀಚಿಗೆ ನಡೆದ ದೌರ್ಜನ್ಯ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ರೆಸಿಡೆಂಟ್ ವೈದ್ಯರ ಸಂಘಟನೆ ಒಕ್ಕೂಟ, ಭಾರತೀಯ ವೈದ್ಯಕೀಯ ಸಂಘಟನೆ, ದೆಹಲಿಯ ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳ ರೆಸಿಡೆಂಟ್ ವೈದ್ಯ ಸಂಘಟನೆಗಳ ಪ್ರತಿನಿಧಿಗಳು ದೆಹಲಿಯಲ್ಲಿಂದು ಕೇಂದ್ರ ಆರೋಗ್ಯ ಕುಟುಂಬ ಕಲ್ಯಾಣ ಸಚಿವಾಲಯಕ್ಕೆ ಭೇಟಿ ನೀಡಿ, ಕಾರ್ಯ ಸ್ಥಳಗಳಲ್ಲಿ ತಮ್ಮ ಸುರಕ್ಷತೆ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಪ್ರತಿನಿಧಿಗಳ ಬೇಡಿಕೆಗಳನ್ನು ಆಲಿಸಿದ ಸಚಿವಾಲಯದ ಅಧಿಕಾರಿಗಳು ಸ್ವಾಸ್ಥ್ಯ ವೃತ್ತಿಪರರ ಸುರಕ್ಷತೆ ಬಗ್ಗೆ ಎಲ್ಲ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ೨೬ ರಾಜ್ಯಗಳು, ಈಗಾಗಲೇ ಆರೋಗ್ಯ ಕಾರ್ಯಕರ್ತರ ಸುರಕ್ಷತೆಗೆ ಸಂಬಂಧಿಸಿದಂತೆ ಶಾಸನಗಳನ್ನು ಅಂಗೀಕರಿಸಿವೆ ಎಂದು ತಿಳಿಸಿರುವ ಸಚಿವಾಲಯದ ಅಧಿಕಾರಿಗಳು ದೇಶದ ವಿವಿಧೆಡೆ ಡೆಂಘಿ ಹಾಗೂ ಮಲೇರಿಯಾ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕರ್ತವ್ಯಕ್ಕೆ ಹಾಜರಾಗುವಂತೆ ಕೋರಿದರು.

<><*<><>*><>

ಕೊಲ್ಕತ್ತಾ ರೆಸಿಡೆಂಟ್ ವೈದ್ಯೆ ಮೇಲಿನ ದೌರ್ಜನ್ಯ ಹಾಗೂ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿವಿಧ ವೈದ್ಯಕೀಯ ಸಂಘಟನೆಗಳು ನೀಡಿದ ಕರೆ ಮೇರೆಗೆ ದೇಶಾದ್ಯಂತ ವೈದ್ಯರು ಇಂದು ಪ್ರತಿಭಟನೆ ನಡೆಸುತ್ತಿದ್ದಾರೆ. ಭಾರತೀಯ ವೈದ್ಯಕೀಯ ಸಂಘಟನೆ ೨೪ ತಾಸುಗಳ ಮುಷ್ಕರಕ್ಕೆ ಕರೆ ನೀಡಿದೆ. ದೆಹಲಿಯ ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆ ಮತ್ತು ಲೇಡಿ ಹರ್ಡಿಂಗೆ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳ ವೈದ್ಯರು ನಡೆಸಿದ ಮುಷ್ಕರದಲ್ಲಿ ಅಖಿಲ ಭಾರತ ವೈದ್ಯ ವಿಜ್ಞಾನ ಸಂಸ್ಥೆಯ ವೈದ್ಯರು ಪಾಲ್ಗೊಂಡಿದ್ದಾರೆ. ಮುಂಬೈಯ ಆಜಾದ್ ಮೈದಾನದಲ್ಲಿ ಬಿಎಂಸಿ, ಎಂಇಆರ್‌ಡಿ ವೈದ್ಯರು ಪ್ರತಿಭಟನೆ ನಡೆಸಿದರು. ಫಲಕ ಪ್ರದರ್ಶಿಸಿ ನ್ಯಾಯಕ್ಕಾಗಿ ಒತ್ತಾಯಿಸಿದರು. ಕರ್ನಾಟಕದ ಬಹುತೇಕ ಎಲ್ಲ ಜಿಲ್ಲೆಗಳಲ್ಲಿ ಪ್ರತಿಭಟನೆ ನಡೆದ ವರದಿಗಳು ಬರುತ್ತಿವೆ.

<><*<><>*><>

ಕೊಲ್ಕತ್ತಾದ ವೈದ್ಯೆಯ ಮೇಲಿನ ದೌರ್ಜನ್ಯ ಮತ್ತು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಭಟನೆ ವ್ಯಕ್ತಪಡಿಸಿದ ವೈದ್ಯರ ವಿರುದ್ಧ ಪಶ್ಚಿಮ ಬಂಗಾಳ ಸರ್ಕಾರ ಕ್ರಮಕೈಗೊಳ್ಳುತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ಪಕ್ಷದ ವಕ್ತಾರ ಶೆಹಜಾದ್ ಪೂನವಾಲ ಅವರು, ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಅನ್ಯಾಯದ ವಿರುದ್ಧ ಧ್ವನಿ ಎತ್ತಿದ ೪೩ ವೈದ್ಯರನ್ನು ಟಿಎಂಸಿ ಸರ್ಕಾರ ವರ್ಗಾವಣೆ ಮಾಡಿದೆ. ಈ ಪ್ರಕರಣದಲ್ಲಿ ದುಷ್ಕೃತ್ಯ ಎಸಗಿದವರನ್ನು ಮರೆಮಾಚಲು ಯತ್ನಿಸಲಾಗುತ್ತಿದೆ ಎಂದು ಆಪಾದಿಸಿದರು. ಈ ಮಧ್ಯೆ ಕೇಂದ್ರ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಕಿರಣ್ ರಿಜಿಜು ಭುವನೇಶ್ವರದಲ್ಲಿಂದು ಮಾತನಾಡಿ, ಕೊಲ್ಕತ್ತಾ ಪ್ರಕರಣ ಆರೋಗ್ಯ ಕ್ಷೇತ್ರದ ವೃತ್ತಿಪರರಿಗೆ ಮಾತ್ರ ಸೀಮಿತವಾಗಿರದೆ, ಇಡೀ ದೇಶದ ಎಲ್ಲರ ಕಾಳಜಿಯ ವಿಷಯವಾಗಿದೆ ಎಂದು ಹೇಳಿದ್ದಾರೆ.

<><*<><>*><>

ಭಾರತೀಯ ನ್ಯಾಯ ಸಂಹಿತೆಯು, ದೇಶದ ಅಪರಾಧ ನ್ಯಾಯದಾನ ಪದ್ಧತಿಯನ್ನು ಅತ್ಯಂತ ಆಧುನಿಕ ವ್ಯವಸ್ಥೆಯನ್ನಾಗಿರಿಸಲಿದೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಖಾತೆ ಸಚಿವ ಅರ್ಜುನ್ ರಾಮ್ ಮೇಘ್‌ವಾಲ್ ಹೇಳಿದ್ದಾರೆ. ಅವರು, ಕೊಚ್ಚಿ ಹೈಕೋರ್ಟ್‌ನಲ್ಲಿಂದು ಕೇಂದ್ರ ಸರ್ಕಾರಿ ಸಲಹಾಕಾರರ ರಾಜ್ಯಮಟ್ಟದ ಅಧಿವೇಶನ ಉದ್ಘಾಟಿಸಿ ಮಾತನಾಡಿ, ಉತ್ತಮ ಆಡಳಿತಕ್ಕೆ ಶೀಘ್ರ ಮತ್ತು ದಕ್ಷ ನ್ಯಾಯ ವ್ಯವಸ್ಥೆಯ ಅಗತ್ಯವಿದೆ. ಭಾರತೀಯ ನ್ಯಾಯ ಸಂಹಿತೆ ಇನ್ನೂ ಐದು ವರ್ಷಗಳಲ್ಲಿ ಇಡೀ ವ್ಯವಸ್ಥೆಯನ್ನು ಆಧುನಿಕಗೊಳಿಸಲಿದೆ ಎಂದರು.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಒಂದು ದಿನದ ಭೇಟಿಗಾಗಿ ಆಂಧ್ರಪ್ರದೇಶದ ಶ್ರೀ ಪೊಟ್ಟಿ ಶ್ರೀರಾಮುಲು ನೆಲ್ಲೂರ್‌ಗೆ ಇಂದು ಭೇಟಿ ನೀಡಿದರು. ತಿರುಪತಿಯಿಂದ ನೆಲ್ಲೂರ್‌ಗೆ ಆಗಮಿಸಿದ ಉಪರಾಷ್ಟ್ರಪತಿಯವರನ್ನು ರಾಜ್ಯಪಾಲ ಅಬ್ದುಲ್ ನಜೀರ್ ಹಾಗೂ ಸಚಿವರು ಬರಮಾಡಿಕೊಂಡರು. ಉಪರಾಷ್ಟ್ರಪತಿ ಅವರು, ವೆಂಕಟಾಚಲಮ್‌ನ ಅಕ್ಷರ ವಿದ್ಯಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಶಿಕ್ಷಣ ಪದ್ಧತಿ ವೀಕ್ಷಿಸಿದರು. ಇದಲ್ಲದೆ, ಕೌಶಲ್ಯ ಅಭಿವೃದ್ಧಿಗಾಗಿ ಶಾಲೆಯಲ್ಲಿ ನಡೆಸಲಾಗುತ್ತಿರುವ ಕೌಶಲ್ಯ ಕೇಂದ್ರದ ಚಟುವಟಿಕೆಗಳನ್ನು ವೀಕ್ಷಿಸಿದರು. ನಂತರ ಸ್ವರ್ಣ ಭಾರತ ಟ್ರಸ್ಟ್‌ಗೆ ಆಗಮಿಸಿದಾಗ ಅವರನ್ನು ಮಾಜಿ ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಬರಮಾಡಿಕೊಂಡರು. ಸ್ವರ್ಣ ಭಾರತ್ ಟ್ರಸ್ಟ್ ನಡೆಸುತ್ತಿರುವ ವಿವಿಧ ಸೇವಾ ಕಾರ್ಯಕ್ರಮಗಳನ್ನು ಉಪರಾಷ್ಟ್ರಪತಿಯವರಿಗೆ ವಿವರಿಸಲಾಯಿತು.

**<><*<><>*><>**

ಕರ್ನಾಟಕದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ - ಮೂಡಾ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾತ್ರ ಕುರಿತು ತನಿಖೆ ನಡೆಸಲು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಇಂದು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ್ದಾರೆ. ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೈತಿಕ ಹೊಣೆ ಹೊತ್ತು ತಕ್ಷಣವೇ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಒತ್ತಾಯಿಸಿದೆ. ಬಿಜೆಪಿ ಪಕ್ಷದ ವಕ್ತಾರ ಸಂಬೀತ್ ಪಾತ್ರ ಅವರು, ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಈ ವಿಚಾರದಲ್ಲಿ ಮುಖ್ಯಮಂತ್ರಿ ಹಾಗೂ ಕುಟುಂಬದವರು ಭಾಗಿಯಾಗಿದ್ದಾರೆ ಎಂದು ಆಪಾದಿಸಿದರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಅವರು ತನಿಖೆಗೆ ಸಹಕರಿಸಬೇಕು ಎಂದರು. ಕಾಂಗ್ರೆಸ್ ವಕ್ತಾರ ಪವನ್ ಕೇರ ಮಾತನಾಡಿ, ಸಾಂವಿಧಾನಿಕ ಹುದ್ದೆಗಳನ್ನು ರಾಜಕೀಯಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು. ಈ ಮಧ್ಯೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಈ ಬಗ್ಗೆ ಕಾನೂನು ಹೋರಾಟ ನಡೆಸಲು ತೀರ್ಮಾನಿಸಲಾಗಿದೆ. ತಮ್ಮ ವಿರುದ್ಧ ದೊಡ್ಡ ಷಡ್ಯಂತ್ರ ನಡೆದಿದೆ. ತಾವು ರಾಜೀನಾಮೆ ಕೊಡುವ ತಪ್ಪು ಮಾಡಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಮುಖ್ಯಮಂತ್ರಿ ವಿರುದ್ಧದ ಆರೋಪದಲ್ಲಿ ಯಾವುದೇ ಹುರುಳಿಲ್ಲ ಎಂದು ಹೇಳಿದ್ದಾರೆ.

**<><*<><>*><>**

ಬಿಜೆಪಿ ರಾಷ್ಟ್ರೀಯ ಪದಾಧಿಕಾರಿಗಳ ಸಭೆ ದೆಹಲಿಯಲ್ಲಿ ನಡೆದಿದೆ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅಧ್ಯಕ್ಷತೆಯಲ್ಲಿ ನಡೆದಿರುವ ಈ ಸಭೆಯಲ್ಲಿ ಪಕ್ಷದ ಸದಸ್ಯತ್ವ ಆಂದೋಲನ, ಸಾಂಸ್ಥಿಕ ಚುನಾವಣೆ ಹಾಗೂ ಮುಂಬರುವ ವಿಧಾನಸಭಾ ಚುನಾವಣೆಗಾಗಿ ಪಕ್ಷದ ಸಿದ್ಧತೆ ಬಗ್ಗೆ ಚರ್ಚೆ ನಡೆದಿದೆ ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ. ಲೋಕಸಭಾ ಚುನಾವಣೆ ನಂತರ ನಡೆದಿರುವ ಬಿಜೆಪಿ ಪದಾಧಿಕಾರಿಗಳ ಅತಿ ದೊಡ್ಡ ಸಭೆ ಇದಾಗಿದ್ದು, ರಾಷ್ಟ್ರೀಯ, ರಾಜ್ಯ ಪದಾಧಿಕಾರಿಗಳು ಸಾಂಸ್ಥಿಕ ಪದಾಧಿಕಾರಿಗಳು ಈ ಸಭೆಯಲ್ಲಿ ಪಾಲ್ಗೊಂಡಿದ್ದಾರೆ.

**<><*<><>*><>**

ಮಿತವ್ಯಯದ ಹಣಕಾಸು ಹೂಡಿಕೆ ಮತ್ತು ಪ್ರಮುಖ ತಂತ್ರಜ್ಞಾನಗಳ ಹರಿವಿಗೆ ಅವಕಾಶ ಕಲ್ಪಿಸಲು ಜಾಗತಿಕ ದಕ್ಷಿಣ ದೇಶಗಳು ಕುಟುಂಬದಂತೆ ಒಂದಾಗಿ ಕಾರ್ಯ ನಿರ್ವಹಿಸಬೇಕು ಎಂದು ವಿದೇಶಾಂಗ ವ್ಯವಹಾರಗಳ ಖಾತೆ ಸಚಿವ ಡಾ.ಎಸ್.ಜೈಶಂಕರ್ ಆಗ್ರಹಿಸಿದ್ದಾರೆ.

**<><*<><>*><>**

ಇದೇ ತಿಂಗಳ ೨೮ ರಂದು ಆರಂಭವಾಗಲಿರುವ ಪ್ಯಾರಿಸ್ ಪ್ಯಾರಾಲಂಪಿಕ್ಸ್‌ನ ಉದ್ಘಾಟನಾ ಸಮಾರಂಭದಲ್ಲಿ ಟೊಕಿಯೊ ಪ್ಯಾರಾಲಂಪಿಕ್ಸ್‌ನ ಚಿನ್ನ ಪದಕ ವಿಜೇತರಾದ ಸಮಿತ್ ಅಂಟಿಲ್ ಮತ್ತು ಭಾಗ್ಯಶ್ರೀ ಯಾದವ್ ಭಾರತೀಯ ಧ್ವಜ ಹಿಡಿದು ತಂಡವನ್ನು ಮುನ್ನೆಡಸಲಿದ್ದಾರೆ. ಮುಂದಿನ ತಿಂಗಳ ೮ರವರೆಗೆ ನಡೆಯಲಿರುವ ಪ್ಯಾರಾಲಂಪಿಕ್ಸ್‌ನಲ್ಲಿ ಒಟ್ಟು ೮೪ ಅಥ್ಲೀಟ್‌ಗಳು ಭಾರತವನ್ನು ಪ್ರತಿನಿಧಿಸಲಿದ್ದಾರೆ. ಇದು ಇದುವರೆಗಿನ ಅತಿ ದೊಡ್ಡ ತಂಡ ಎನಿಸಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**